# Akashvani : Bangalore
# National Bulletin In Kannada
# 16.11.2024 / 19.35 hrs

## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮೂರು ದೇಶಗಳ ಭೇಟಿಯ ಮೊದಲ ಚರಣದಲ್ಲಿ ನೈಜಿರಿಯಾಗೆ ಇಂದು ಪ್ರಧಾನಿ ನರೇಂದ್ರ ಮೋದಿ ಪ್ರಯಾಣ

೨. ಮಹಾರಾಷ್ಟ್ರ, ಜಾರ್ಖಂಡ್ ಚುನಾವಣೆ; ಎನ್‌ಡಿಎ, ಐಎನ್‌ಡಿಐ ಮೈತ್ರಿಕೂಟದ ನಾಯಕರಿಂದ ಪ್ರಚಾರ

೩. ದೇಶಾದ್ಯಂತ ಇಂದು ರಾಷ್ಟ್ರೀಯ ಪತ್ರಿಕಾ ದಿನ ಆಚರಣೆ

೪. ಮಹಿಳಾ ಏಷ್ಯನ್ ಹಾಕಿ: ಚೀನಾ ವಿರುದ್ಧ ಭಾರತಕ್ಕೆ ಗೆಲುವು

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ನೈಜೀರಿಯಾ, ಬ್ರೆಜಿಲ್ ಹಾಗೂ ಗಯಾನಾ ದೇಶಗಳಿಗೆ ಆರು ದಿನಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಮೂರು ದೇಶಗಳ ಭೇಟಿಯ ಮೊದಲ ಚರಣದಲ್ಲಿ ಪ್ರಧಾನಿ ಮೋದಿ, ನೈಜೀರಿಯ ಅಧ್ಯಕ್ಷ ಬೋಲಾ ಅಹ್ಮದ್ ಟಿನುಬು ಅವರ ಆಹ್ವಾನದ ಮೇರೆಗೆ ನೈಜೀರಿಯಾಕ್ಕೆ ಪ್ರಯಾಣ ಬೆಳೆಸಿದ್ದಾರೆ. ೧೭ ವರ್ಷಗಳ ನಂತರ ಭಾರತದ ಪ್ರಧಾನಿಯೊಬ್ಬರು ನೈಜೀರಿಯಾಕ್ಕೆ ಭೇಟಿ ನೀಡುತ್ತಿದ್ದಾರೆ. ತಮ್ಮ ಎರಡು ದಿನಗಳ ನೈಜೀರಿಯಾ ಭೇಟಿಯ ಸಂದರ್ಭದಲ್ಲಿ ಉಭಯ ದೇಶಗಳ ಪ್ರಧಾನಿಗಳು, ಎರಡು ದೇಶಗಳ ನಡುವಣ ಕಾರ್ಯತಂತ್ರ ಸಹಭಾಗಿತ್ವ ಪರಿಶೀಲನೆ ಹಾಗೂ ದ್ವಿಪಕ್ಷೀಯ ಸಂಬಂಧ ಹೆಚ್ಚಿಸುವ ಮಾರ್ಗೋಪಾಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ನೈಜೀರಿಯಾದಲ್ಲಿರುವ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಪ್ರಧಾನಿ ಮಾತನಾಡಲಿದ್ದಾರೆ. ಭಾರತ ಮತ್ತು ನೈಜೀರಿಯಾ ಆರ್ಥಿಕ, ಇಂಧನ ಹಾಗೂ ರಕ್ಷಣಾ ಸಹಯೋಗದೊಂದಿಗೆ ೨೦೦೭ರಿಂದ ಕಾರ್ಯತಂತ್ರ ಪಾಲುದಾರ ದೇಶಗಳಾಗಿವೆ. ನೈಜೀರಿಯಾದಲ್ಲಿನ ಪ್ರಮುಖ ವಲಯಗಳಲ್ಲಿ ೨೦೦ಕ್ಕೂ ಹೆಚ್ಚು ಭಾರತೀಯ ಕಂಪನಿಗಳು ೨೭ ಬಿಲಿಯನ್ ಡಾಲರ್‌ಗೂ ಹೆಚ್ಚು ಹೂಡಿಕೆ ಮಾಡಿವೆ. ಎರಡೂ ದೇಶಗಳು ಬಲಿಷ್ಠ ಅಭಿವೃದ್ಧಿ ಸಹಕಾರ ಪಾಲುದಾರಿಕೆಯನ್ನು ಹಂಚಿಕೊಂಡಿವೆ. ಪ್ರಧಾನಿ ನರೇಂದ್ರ ಮೋದಿ ಎರಡನೇ ಚರಣದಲ್ಲಿ ಇದೇ ೧೮ರಂದು ನೈಜೀರಿಯಾದಿಂದ ಬ್ರೆಜಿಲ್‌ನ ನಗರ ರಿಯೊ ಡಿ ಜನೈರೋಗೆ ಪ್ರಯಾಣಿಸಲಿದ್ದಾರೆ. ಅಲ್ಲಿನ ಅಧ್ಯಕ್ಷ ಲೂಯಿಸ್ ಇನಾಸಿಯೊ ಲೂಲಾ ಡಾ ಸಿಲ್ವಾ ಆಯೋಜಿಸಿರುವ ಜಿ-೨೦ ಶೃಂಗಸಭೆಯಲ್ಲಿ ಭಾಗಿಯಾಗಲಿದ್ದಾರೆ. ಜಿ೨೦ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ಅವರು, ಹಲವಾರು ನಾಯಕರನ್ನು ಭೇಟಿ ಮಾಡುವ ನಿರೀಕ್ಷೆ ಇದೆ. ಮೂರನೇ ಹಾಗೂ ಅಂತಿಮ ಚರಣದಲ್ಲಿ ಪ್ರಧಾನಿ ಮೋದಿ ಅವರು, ಇದೇ ೧೯ರಿಂದ ೨೧ರವರೆಗೆ ಗಯಾನಾಕ್ಕೆ ಭೇಟಿ ನೀಡಲಿದ್ದಾರೆ. ೧೯೬೮ರ ನಂತರ ಭಾರತೀಯ ಪ್ರಧಾನಿಯೊಬ್ಬರ ಮೊದಲ ಗಯಾನ ಭೇಟಿ ಇದಾಗಿದೆ. ತಮ್ಮ ಗಯಾನ ಭೇಟಿಯ ವೇಳೆ ಪ್ರಧಾನಿ ಮೋದಿ, ಗಯಾನ ಅಧ್ಯಕ್ಷ ಅಲಿ ಅವರೊಂದಿಗೆ ಸಮಾಲೋಚನೆ ನಡೆಸಲಿದ್ದು, ಆ ದೇಶದ ಹಲವು ಹಿರಿಯ ನಾಯಕರನ್ನು ಭೇಟಿ ಮಾಡಲಿದ್ದಾರೆ. ಅಲ್ಲದೆ ಗಯಾನ ಸಂಸತ್ ಉದ್ದೇಶಿಸಿ ಭಾಷಣ ಮಾಡಲಿರುವ ಪ್ರಧಾನಿ, ಭಾರತೀಯ ಸಮುದಾಯದೊಂದಿಗೂ ಸಹ ಸಂವಾದ ನಡೆಸಲಿದ್ದಾರೆ. ಗಯಾನದ ಜಾರ್ಜ್‌ಟೌನ್‌ನಲ್ಲಿ ಪ್ರಧಾನಿ ಮೋದಿ, ಎರಡನೇ ಕ್ಯಾರಿಕಾಮ್-ಇಂಡಿಯಾ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಅಲ್ಲದೆ ಈ ವಲಯದೊಂದಿಗೆ ಭಾರತದ ದೀರ್ಘಕಾಲದ ಸ್ನೇಹವನ್ನು ಮತ್ತಷ್ಟು ಹೆಚ್ಚಿಸಲು ಕ್ಯಾರಿಕಾಮ್ ಸದಸ್ಯ ದೇಶಗಳ ನಾಯಕರೊಂದಿಗೆ ಸಭೆಗಳನ್ನು ನಡೆಸಲಿದ್ದಾರೆ. ಪ್ರವಾಸ ಹೊರಡುವ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ಸಾಮಾಜಿಕ ಜಾಲತಾಣದಲ್ಲಿ, ಈ ಭೇಟಿಯು ಪ್ರಜಾಪ್ರಭುತ್ವ ಮತ್ತು ಬಹುತ್ವದಲ್ಲಿ ಹಂಚಿಕೊಂಡ ನಂಬಿಕೆಯ ಆಧಾರದ ಮೇಲೆ ಕಾರ್ಯತಂತ್ರದ ಪಾಲುದಾರಿಕೆಯನ್ನು ನಿರ್ಮಿಸಲು ಒಂದು ಅವಕಾಶವಾಗಿದೆ ಎಂದು ಹೇಳಿದರು. ನೈಜೀರಿಯಾದಲ್ಲಿರುವ ಭಾರತೀಯ ಸಮುದಾಯವನ್ನು ಹಾಗೂ ಹಿಂದಿಯಲ್ಲಿ ತನಗೆ ಸ್ವಾಗತ ಸಂದೇಶಗಳನ್ನು ಕಳುಹಿಸಿದ ನೈಜೀರಿಯಾದ ಜನರನ್ನು ಭೇಟಿಯಾಗಲು ಉತ್ಸುಕವಾಗಿದ್ದೇನೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

<><*<><>*><>

ಜಾರ್ಖಂಡ್ ವಿಧಾನಸಭೆಯ ಎರಡನೇ ಹಂತದ ಚುನಾವಣೆ ಹಿನ್ನೆಲೆಯಲ್ಲಿ ಎನ್‌ಡಿಎ ಮತ್ತು ಐಎನ್‌ಡಿಐ ಮೈತ್ರಿಕೂಟದ ಐಎನ್‌ಡಿಐ ಮೈತ್ರಿಕೂಟದ ನಾಯಕರು ರಾಜ್ಯಾದ್ಯಂತ ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ. ದುಮ್ಕಾದ ಗಾಂಧಿ ದುಮ್ಕಾದ ಗಾಂಧಿ ಮೈದಾನದಲ್ಲಿ ಇಂದು ನಡೆದ ಚುನಾವಣಾ ರ್‍ಯಾಲಿ ಉದ್ದೇಶಿಸಿ ಮಾತನಾಡಿದ ಕೇಂದ್ರ ಗೃಹ ಸಚಿವ ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಶಾ, ಜಾರ್ಖಂಡ್‌ನ ಹೇಮಂತ್ ಸೊರೆನ್ ಸರ್ಕಾರ ಕೇವಲ ಸರ್ಕಾರ ಕೇವಲ ಮತ ಬ್ಯಾಂಕ್‌ಗಾಗಿ ಆದಿವಾಸಿಗಳನ್ನು ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದ್ದಾರೆ. ಜಮ್ತಾರದಲ್ಲಿ

ಆರೋಪಿಸಿದ್ದಾರೆ. ಜಮ್ತಾರದಲ್ಲಿ ಬಿಜೆಪಿ ಹಿರಿಯ ನಾಯಕ ಹಿಮಂತ್ ಬಿಸ್ವಾ ಶರ್ಮಾ, ಪಕ್ಷದ ಅಭ್ಯರ್ಥಿ ಪರ ಅಭ್ಯರ್ಥಿ ಪರ ಮತಯಾಚಿಸಿದರು. ಮತ್ತೊಂದೆಡೆ, ದುಮ್ಕಾದಲ್ಲಿ ಚುನಾವಣಾ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಉದ್ದೇಶಿಸಿ ಮಾತನಾಡಿದ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್, ರಾಜ್ಯದಲ್ಲಿ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣೆ ಹಿನ್ನೆಲೆಯಲ್ಲಿ ಸಿಬಿಐ ಮತ್ತು ಇಡಿ ದಾಳಿಗಳು ಅಧಿಕಗೊಂಡಿವೆ ಎಂದು ಆರೋಪಿಸಿದ್ದಾರೆ. ಜಮ್ತಾರ ಮತ್ತು ಆರೋಪಿಸಿದ್ದಾರೆ. ಜಮ್ತಾರ ಮತ್ತು ಖಿಜ್ರಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಗೊಡ್ಡಾದಲ್ಲಿ ಆರ್‌ಜೆಡಿ ಖರ್ಗೆ, ಗೊಡ್ಡಾದಲ್ಲಿ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್, ಐಎನ್‌ಡಿಐಎ ಮೈತ್ರಿಕೂಟದ ಅಭ್ಯರ್ಥಿಗಳ ಪರ ಪ್ರಚಾರ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದರು. ನಟ, ಬಿಜೆಪಿ ನಾಯಕ ಮಿಥುನ್ ಚಕ್ರವರ್ತಿ ದುಮ್ಕಾ ಮತ್ತು ಜಮ್ತಾರದಲ್ಲಿ ಮತ್ತು ಜಮ್ತಾರದಲ್ಲಿ ನಡೆದ ಚುನಾವಣಾ ರ್‍ಯಾಲಿಗಳಲ್ಲಿ ಭಾಗವಹಿಸಿದ್ದರು. ಇದೇ ವೇಳೆ ಬಿಜೆಪಿ ಹಿರಿಯ ಬಿಜೆಪಿ ಹಿರಿಯ ನಾಯಕರಾದ ಶಿವರಾಜ್ ಸಿಂಗ್ ಚೌಹಾಣ್, ಚಂಪೈ ಸೊರೆನ್ ಸೇರಿದಂತೆ ಬಿಜೆಪಿ ನಾಯಕರು ರಾಜ್ಯದ ನಾಯಕರು ರಾಜ್ಯದ ವಿವಿಧೆಡೆ ಎನ್‌ಡಿಎ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದರು. ಜಾರ್ಖಂಡ್‌ನಲ್ಲಿ ಇದೇ ೨೦ ರಂದು ಜಾರ್ಖಂಡ್‌ನಲ್ಲಿ ಇದೇ ೨೦ ರಂದು ಎರಡನೇ ಹಂತದ ಮತದಾನ ನಡೆಯಲಿದ್ದು, ಇದೇ ೨೩ ರಂದು ಮತ ಎಣಿಕೆ ಕಾರ್ಯ ಎಣಿಕೆ ಕಾರ್ಯ ನಡೆಯಲಿದೆ.

<><*<><>*><>

ಮುಂದಿನ ಐದು ವರ್ಷಗಳಲ್ಲಿ ಮುಂಬೈ ನಿವಾಸಿಗಳ ಪ್ರಯಾಣ ಗಣನೀಯವಾಗಿ ಸುಧಾರಿಸಲಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಮುಂಬೈನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿವಿಧ ರೈಲ್ವೇ ಯೋಜನೆಗಳಲ್ಲಿ ಮಹಾರಾಷ್ಟ್ರದಲ್ಲಿ ೧ ಲಕ್ಷದ ೬೪ ಸಾವಿರದ ೬೦೫ ಕೋಟಿ ರೂಪಾಯಿ ಹೂಡಿಕೆ ಮಾಡಲಾಗುತ್ತಿದೆ. ವಿವಿಧ ಮೆಟ್ರೋ ಯೋಜನೆಗಳಲ್ಲಿ ರಾಜ್ಯದಲ್ಲಿ ೧ ಲಕ್ಷದ ೧೦ ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ದೇಶದ ಮೊದಲ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಕ್ರಿಯೆಟಿವ್ ಟೆಕ್ನಾಲಜಿಯನ್ನು ಮುಂಬೈನಲ್ಲಿ ಸ್ಥಾಪಿಸಲಾಗುವುದು. ಈಗಾಗಲೇ ಇದಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದ್ದು, ಶೀಘ್ರದಲ್ಲಿ ಕಾಮಗಾರಿ ಪ್ರಾರಂಭವಾಗಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

<><*<><>*><>

ಪ್ರಜಾಪ್ರಭುತ್ವ ಕಾಪಾಡುವಲ್ಲಿ ಮಾಧ್ಯಮಗಳ ಪಾತ್ರ ಹಿರಿದು ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.  ನವದೆಹಲಿಯಲ್ಲಿ ಇಂದು ನಡೆದ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಹೋರಾಟದಲ್ಲಿ ಮತ್ತು ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಪತ್ರಿಕಾ ಮಾಧ್ಯಮವು ಪ್ರಮುಖ ಪಾತ್ರ ವಹಿಸಿದೆ ಎಂದರು.  ಸಾಂಪ್ರದಾಯಿಕ ಮಾಧ್ಯಮದಿಂದ ಡಿಜಿಟಲ್ ಮಾಧ್ಯಮಕ್ಕೆ ವೇಗವಾಗಿ ಪರಿವರ್ತನೆಯಾಗುತ್ತಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು. ಕಾರ್ಯಕ್ರಮದಲ್ಲಿ ವರ್ಚುಯೆಲ್ ಮೂಲಕ ಮಾತನಾಡಿದ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಹಾಯಕ ಸಚಿವ ಡಾ. ಎಲ್.ಮುರುಗನ್, ಪತ್ರಿಕೋದ್ಯಮವು ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾಗಿದೆ ಎಂದರು.

<><*<><>*><>

ಉತ್ತರ ಪ್ರದೇಶದ ಝಾನ್ಸಿಯ ಮಹಾರಾಣಿ ಲಕ್ಷ್ಮೀ ಬಾಯಿ ವೈದ್ಯಕೀಯ ಕಾಲೇಜಿನ ನವಜಾತ ಶಿಶುಗಳ ತುರ್ತು ನಿಗಾ ಘಟಕ - ಎನ್‌ಐಸಿಯುನಲ್ಲಿ ನಿನ್ನೆ ರಾತ್ರಿ ಸಂಭವಿಸಿದ ಭಾರೀ ಬೆಂಕಿ ಅವಘಡದಲ್ಲಿ ಹತ್ತು ಶಿಶುಗಳು ಸಾವನ್ನಪ್ಪಿದ್ದು, ೧೬ ಮಂದಿ ಗಾಯಗೊಂಡಿದ್ದಾರೆ.  ಈ ವಿಷಯದ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಅವಿನಾಶ್ ಕುಮಾರ್, ಬೆಂಕಿ ಹೊತ್ತಿಕೊಂಡ ಸಮಯದಲ್ಲಿ ೪೭ ಶಿಶುಗಳನ್ನು ಎನ್‌ಐಸಿಯು ವಾರ್ಡ್‌ಗೆ ದಾಖಲಿಸಲಾಗಿತ್ತು ಮತ್ತು ಹಲವಾರು ಶಿಶುಗಳನ್ನು ರಕ್ಷಿಸಲಾಗಿದೆ ಎಂದು ಅವರು ಹೇಳಿದರು. ಝಾನ್ಸಿ ವೈದ್ಯಕೀಯ ಕಾಲೇಜಿನಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಸಾವು-ನೋವುಗಳಿಗೆ ಪ್ರಧಾನಿ ನರೇಂದ್ರ ಮೋದಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅಗ್ನಿ ಅವಘಡದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ೨ ಲಕ್ಷ ರೂಪಾಯಿ, ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರವನ್ನು ಪ್ರಧಾನಿ ಮೋದಿ ಘೋಷಿಸಿದ್ದಾರೆ.

<><*<><>*><>

ಹುತಾತ್ಮ ಕರ್ತಾರ್ ಸಿಂಗ್ ಸರಭಾ ಅವರಿಗೆ ಇಂದು ದೇಶಾದ್ಯಂತ ಗೌರವ ಸಲ್ಲಿಸಲಾಯಿತು.  ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿದ್ದಕ್ಕಾಗಿ ಮಹಾನ್ ಕ್ರಾಂತಿಕಾರಿ ಕರ್ತಾರ್ ಸಿಂಗ್ ಸರಭಾ ಅವರನ್ನು ಬ್ರಿಟಿಷ್ ಸರ್ಕಾರವು, ೧೯೧೫ರಲ್ಲಿ ಈ ದಿನದಂದು ಗಲ್ಲಿಗೇರಿಸಿದಾಗ ಅವರಿಗೆ ಕೇವಲ ೧೯ ವರ್ಷ. ಅವರಂದಿಗೆ ಇತರೆ ಆರು ಭಾರತೀಯರನ್ನು ಸಹ ಗಲ್ಲಿಗೇರಿಸಲಾಯಿತು. ಅವರ ಪ್ರಾಣಾರ್ಪಣೆಯು ಹುತಾತ್ಮ ಭಗತ್ ಸಿಂಗ್ ಸೇರಿದಂತೆ ಅನೇಕ ಯುವಕರನ್ನು ಭಾರತೀಯ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಲು ಪ್ರೇರೇಪಿಸಿತು.

<><*<><>*><>

ನವದೆಹಲಿಯಲ್ಲಿಂದು ನಡೆದ ೪೩ ನೇ ಭಾರತ ಅಂತಾರಾಷ್ಟ್ರೀಯ ವ್ಯಾಪಾರ ಮೇಳದಲ್ಲಿ ಎಮ್‌ಎಸ್‌ಎಮ್‌ಇ ಎಮ್‌ಎಸ್‌ಎಮ್‌ಇ ಮಂಟಪವನ್ನು ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವ ಜಿತನ್ ರಾಮ್ ಜಿತನ್ ರಾಮ್ ಮಾಂಝಿ ಉದ್ಘಾಟಿಸಿದರು. ಈ ವರ್ಷದ ಘೋಷವಾಕ್ಯ 'ಹಸಿರು ಎಮ್‌ಎಸ್‌ಎಮ್‌ಇ' ಎಂಬುದಾಗಿದೆ.

ಎಂಬುದಾಗಿದೆ. ಎಂಎಸ್‌ಎಂಇಗಳು ತಮ್ಮ ವ್ಯಾಪಾರ ಕಾರ್ಯಾಚರಣೆಗಳನ್ನು ಪರಿವರ್ತಿಸಲು ಸ್ವಚ್ಛ ಮತ್ತು ಹಸಿರು ಮತ್ತು ಹಸಿರು ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವಲ್ಲಿ ಸಚಿವಾಲಯದ ಗಮನವನ್ನು ಇದು ಒತ್ತಿಹೇಳುತ್ತದೆ ಎಂದು ಒತ್ತಿಹೇಳುತ್ತದೆ ಎಂದು ಸಚಿವಾಲಯ ತಿಳಿಸಿದೆ. ಈ ವರ್ಷ ೨೯ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಪ್ರದೇಶಗಳನ್ನು ಪ್ರತಿನಿಧಿಸುವ ೨೦೦ ಪ್ರದರ್ಶಕರು ಪ್ರದರ್ಶನದಲ್ಲಿ ಭಾಗವಹಿಸಿದ್ದಾರೆ. ಈ ಮಂಟಪದಲ್ಲಿ ಜವಳಿ, ಮಂಟಪದಲ್ಲಿ ಜವಳಿ, ಕೈಮಗ್ಗ, ಕರಕುಶಲ ವಸ್ತುಗಳು, ಕಸೂತಿ, ಚರ್ಮದ ಪಾದರಕ್ಷೆಗಳು, ಆಟಿಕೆಗಳು, ಬಿದಿರಿನ ಬಿದಿರಿನ ಕರಕುಶಲ ವಸ್ತುಗಳು, ಆಭರಣಗಳು, ಪಿಂಗಾಣಿಗಳು, ಕುಂಬಾರಿಕೆ ಉತ್ಪನ್ನಗಳು ಸೇರಿದಂತೆ ವಿವಿಧ ವಿವಿಧ ಉತ್ಪನ್ನಗಳನ್ನು ಪ್ರದರ್ಶಿಸಲಾಗುತ್ತಿದೆ.

**<><*<><>*><>**

ಬಿಹಾರದ ರಾಜ್‌ಗಿರ್‌ನಲ್ಲಿ ನಡೆಯುತ್ತಿರುವ ಮಹಿಳಾ ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಆತಿಥೇಯ ಭಾರತವು ತನ್ನ ಅಜೇಯ ದಾಖಲೆಯನ್ನು ಕಾಯ್ದುಕೊಂಡಿದೆ. ಇಂದು ಸಂಜೆ ನಡೆದ ತಮ್ಮ ನಾಲ್ಕನೇ ಪಂದ್ಯದಲ್ಲಿ ಭಾರತ ತಂಡವು ಚೀನಾವನ್ನು ೩-೦ ಗೋಲುಗಳಿಂದ ಸೋಲಿಸಿದೆ. ಸತತ ನಾಲ್ಕು ಗೆಲುವಿನೊಂದಿಗೆ ಭಾರತವು ಪಂದ್ಯಾವಳಿಯಲ್ಲಿ ಅಗ್ರಸ್ಥಾನದಲ್ಲಿರುವ ಚೀನಾವನ್ನು ಹಿಂದಿಕ್ಕಿದೆ. ಸಂಗೀತಾ, ಸಲೀಮಾ ಮತ್ತು ದೀಪಿಕಾ ಅವರ ಗೋಲುಗಳು ಭಾರತದ ಗೆಲುವಿಗೆ ನೆರವಾದವು. ನಾಳೆ ನಡೆಯಲಿರುವ ಪಂದ್ಯದಲ್ಲಿ ಭಾರತ ತಂಡ ಜಪಾನ್ ವಿರುದ್ಧ ಸೆಣಸಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>**